# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s KCL Re Energy Pvt Ltd., ಪ್ರೈವೇಟ್ ಲಿಮಿಟೆಡ್ ಇವರಿಗೆ 10.00 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಯೋಜನೆಗೆ ನಿರಾಕ್ಷೇಪಣೆ ನೀಡುವ ಕುರಿತು.

ಓದಲಾಗಿದೆ: 1 ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ:KRED/07/GC/IPP-KCLREPL/2014-15/5171 ದಿನಾಂಕ: 03/2.12.2014

2 ದಿನಾಂಕ: 02.12.2014 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

* * *

ಪ್ರಸ್ತಾವನೆ :-

M/s KCL Re Energy Pvt Ltd., ರವರು ಬೆಸ್ಕಾಂ ವ್ಯಾಪ್ತಿಯಲ್ಲಿನ ಕೋಲಾರ ಜಿಲ್ಲೆಯ ಮುಳಬಾಗಿಲು ತಾಲ್ಲೂಕಿನ ಕುರುಬರಹಳ್ಳಿ ಗ್ರಾಮದ ಖಾಸಗಿ ಜಮೀನಿನಲ್ಲಿ 10 ಮೆ.ವ್ಯಾ. ಸಾಮರ್ಥ್ಯದ PV ಸೌರ ವಿದ್ಯುತ್ ಘಟಕ ಸ್ಥಾಪಿಸಲು ಅನುಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ ಸದರಿಯವರಿಗೆ ನಿರಾಕ್ಷೇಪಣೆ ನೀಡುವ ಕುರಿತು ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ನಡೆದ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. ಹಂಚಿಕೆ ಸಮಿತಿಯು ಸರ್ಕಾರದ ಸೌರ ನೀತಿ 2014-21 ರ ನಿಯಮ 10 ರಲ್ಲಿನ ಉಪಬಂಧಗಳಂತೆ ಪ್ರಸ್ತಾವನೆಯನ್ನು ವಿವರವಾಗಿ ಪರಿಶೀಲಿಸಿ, ನಡವಳಿಯ ಕ್ರಮ ಸಂಖ್ಯೆ III (5) ರಲ್ಲಿ M/s KCL Re Energy Pvt Ltd., ರವರಿಗೆ ಬೆಸ್ಕಾಂ ವ್ಯಾಪ್ತಿಯಲ್ಲಿನ ಕೋಲಾರ ಜಿಲ್ಲೆಯ ಮುಳಬಾಗಿಲು ತಾಲ್ಲೂಕಿನ ಕುರುಬರಹಳ್ಳಿ ಗ್ರಾಮದ ಖಾಸಗಿ ಜಮೀನಿನಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕ ಸ್ಥಾಪಿಸುವ ಪ್ರಸ್ತಾವನೆಗೆ ಹಂಚಿಕೆ ಸಮಿತಿಯು ಅನುಮೋದಿಸಿರುತ್ತದೆ. ಆದುದರಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ : -

## ಸರ್ಕಾರಿ ಆದೇಶ ಸಂಖ್ಯೆ : ಇಎನ್ 282 ಎನ್‌ಸಿಇ 2014,
## ಬೆಂಗಳೂರು, ದಿನಾಂಕ : 21.01.2015.

M/s KCL Re Energy Pvt Ltd., ರವರಿಗೆ ಬೆಸ್ಕಾಂ ವ್ಯಾಪ್ತಿಯಲ್ಲಿನ ಕೋಲಾರ ಜಿಲ್ಲೆಯ ಮುಳಬಾಗಿಲು ತಾಲ್ಲೂಕಿನ ಕುರುಬರಹಳ್ಳಿ ಗ್ರಾಮದ ಖಾಸಗಿ ಜಮೀನಿನಲ್ಲಿ 10 ಮೆ.ವ್ಯಾ. ಸಾಮರ್ಥ್ಯದ PV ಸೌರ ವಿದ್ಯುತ್ ಘಟಕ ಸ್ಥಾಪಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ನಿರಾಕ್ಷೇಪಣೆಯನ್ನು ನೀಡಲಾಗಿದೆ.

1. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ /ಸಂಸ್ಥೆಗಳ ಅನುಮೋದನೆ ಪಡೆದುಕೊಳ್ಳತಕ್ಕದ್ದು;
2. ಅಭಿವೃದ್ಧಿದಾರರು ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಕೆ.ಇ.ಆರ್.ಸಿ. ನಿಯಮಗಳನ್ವಯ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಿದೆ.

---2)

ಸದರಿ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☏ 22034674.

ಇವರಿಗೆ:
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

ಪ್ರತಿ:

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.
2 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.
6 ಜಿಲ್ಲಾಧಿಕಾರಿಗಳು, ಕೋಲಾರ ಜಿಲ್ಲೆ, ಕೋಲಾರ.
7 ಉಪ ಅರಣ್ಯ ಸಂರಕ್ಷಣಾಧಿಕಾರಿ ಕೋಲಾರ ಜಿಲ್ಲೆ, ಕೋಲಾರ.
8 ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಬೆಂಗಳೂರು.
9 M/s KCL Re Energy Pvt Ltd # 218, HRBR Layouth, 3rd Block, Kalyan Nagar, Bangalore – 560 043.
10 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
11 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
12 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.